# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.325/2021

ಸಾಕ್ಷಿದಾರರ ಹೇಳಿಕೆಃ

**ಹೆಸರು** : ಹೆಚ್ ಬಿ ಸೋಮಶೇಖರ ಚಾಸಾಃ **2** ಫ್ರಾಸಾಃ **6**

**ತಂದೆಯ ಹೆಸರು** : ಬಸಪ್ಪ ಹೆಚ್

**ವಯಸ್ಸು** : **45** ವರ್ಷ

**ವೃತ್ತಿ** : ವ್ಯವಸಾಯ

**ವಾಸಸ್ಥಳ** : ಮಲೇಕುಂಬಳೂರು

ದಿನಾಂಕಃ **06-03-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಚಾಸಾ-1 ಮತ್ತು 3 ಗೊತ್ತು. ಈಗೇ ಸುಮಾರು 5 ವರ್ಷಗಳ ಹಿಂದೆ ನನ್ನ ವೈಯಕ್ತಿಕ ಕೆಲಸದ ಮೇರೆಗೆ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರ ಕೋರಿಕೆಯ ಮೇರೆಗೆ 5 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮತ್ತು ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿರುವುದಿಲ್ಲ. ಸಾಕ್ಷಿಯು ನಿಪಿ-4, 5, 7 ಮತ್ತು 8 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಮತ್ತು ಮರುಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸ್ಥಳ ಮಹಜರ್ ಅನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು, ಅಮಾನತ್ತು ಮಹಜರ್ ಅನ್ನು ಈಗಾಗಲೇ ನಿಪಿ-6 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-6(ಸಿ) ಎಂದು, ಸ್ಥಳ ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ಈಗಾಗಲೇ ನಿಪಿ-10 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-10(ಬಿ) ಎಂದು, ಅಮಾನತ್ತು

ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ಈಗಾಗಲೇ ನಿಪಿ-11 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-11(ಬಿ) ಎಂದು, ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ದಿಃ 07-01-2021 ರಂದು ಪೊಲೀಸರಿಂದ ನಿಪಿ-10 ಮತ್ತು 11 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅದೇ ದಿನ ಬೆಳಗ್ಗೆ 11-00 ರಿಂದ 12-00 ಗಂಟೆ ಸಮಯದಲ್ಲಿ ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ, ನಿಪಿ-3 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ, ನಿಪಿ-4 ಮತ್ತು 5 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

ಅದೇ ದಿನ ಮಧ್ಯಾಹ್ನ 01-00 ರಿಂದ 02-00 ಗಂಟೆ ಸಮಯದವರೆಗೆ ನನ್ನ ಮತ್ತು ಚಾಸಾ-1 ಮತ್ತು 3 ರವರ ಸಮಕ್ಷಮ ಅಪಘಾತಕ್ಕೀಡಾದ ಕೆಎ-17/ಹೆಚ್ ಬಿ-9641 ಮೋಟಾರ್ ಸೈಕಲ್ ಮತ್ತು ಕೆಎ-17/ಡಿ-6320 ಗೂಡ್ಸ್ ಆಟೋವನ್ನು ಅಮಾನತ್ತು ಪಡಿಸಿಕೊಂಡು ನಿಪಿ-6 ರಂತೆ ಮಹಜರ್ ಕ್ರಮ ಜರುಗಿಸಿ, ನಿಪಿ-7 ಮತ್ತು 8 ರಂತೆ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-18 ರಂತೆ ಹೇಳಿಕೆಯನ್ನು ಮತ್ತು ನಿಪಿ-19 ರಂತೆ ಮರುಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.